# ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ

ಸಂಖ್ಯೆ: ಕವಿಪ್ರನಿನಿ/ಜಿರಿಎ/3314/2014-15

ನಿಗಮ ಕಾರ್ಯಾಲಯ
ಕಾವೇರಿ ಭವನ
ಬೆಂಗಳೂರು 560009
ದಿನಾಂಕ: 04 MAY 2018

## ಅಧಿಕೃತ ಜ್ಞಾಪನ

ವಿಷಯ: ಕವಿಪ್ರನಿನಿಯ ಕನ್ನಡ ಘಟಕವನ್ನು ಬಲಗೊಳಿಸಲು ತೆಗೆದುಕೊಂಡ ಕ್ರಮಗಳ ಬಗ್ಗೆ.

ಉಲ್ಲೇಖ:
1. ನಿಗಮದ ಅಧಿಕೃತ ಜ್ಞಾಪನಾ ಸಂಖ್ಯೆ: ಜಿರಿಎ/3314/03-04 ದಿನಾಂಕ: 28.09.2007, 22.09.2008 ಮತ್ತು 17.03.2015.
2. ನಿಗಮದ ಸುತ್ತೋಲೆ ಸಂಖ್ಯೆ: ಕವಿಪ್ರನಿನಿ/ಕಘ/ಸ-20510/15-16 ದಿನಾಂಕ:02.02.2018.

ಕನ್ನಡ ಅಭಿವೃದ್ಧಿ ಪ್ರಾಧಿಕಾರವು ಆಡಳಿತದಲ್ಲಿ ಕನ್ನಡ ಭಾಷೆಯನ್ನು ಅನುಷ್ಠಾನಗೊಳಿಸುವ ವಿಷಯದಲ್ಲಿ ಕಾಲಕಾಲಕ್ಕೆ ನೀಡುವ ನಿರ್ದೇಶನಗಳನ್ನು ನಿಗಮವು ಪಾಲಿಸಬೇಕಿರುತ್ತದೆ ಮತ್ತು ತೆಗೆದುಕೊಂಡ ಕ್ರಮಗಳ ವಿಷಯದಲ್ಲಿ ಕನ್ನಡ ಅಭಿವೃದ್ಧಿ ಪ್ರಾಧಿಕಾರಕ್ಕೆ ಅನುಸರಣಾ ವರದಿಗಳನ್ನು ಸಲ್ಲಿಸಬೇಕಿರುತ್ತದೆ. ಈ ಕಾರ್ಯಗಳನ್ನು ಹೆಚ್ಚು ಪರಿಣಾಮಕಾರಿಯಾಗಿ ನಿರ್ವಹಿಸಲು ಮತ್ತು ಕವಿಪ್ರನಿನಿ ನಿಗಮ ಕಾರ್ಯಾಲಯದಲ್ಲಿ ಹಲವು ವಿಷಯಗಳನ್ನು ಕನ್ನಡ ಭಾಷೆಗೆ ತರ್ಜುಮೆಗೊಳಿಸುವ ಕಾರ್ಯಗಳಿಗೆ ಅನುಕೂಲವಾಗಲು ಕವಿಪ್ರನಿನಿ ನಿಗಮ ಕಾರ್ಯಾಲಯದಲ್ಲಿ ಕಾರ್ಯನಿರ್ವಹಿಸುತ್ತಿರುವ ಕನ್ನಡ ಘಟಕವನ್ನು ಬಲಗೊಳಿಸುವ ಅವಶ್ಯಕತೆಯಿರುವುದರಿಂದ, ತಕ್ಷಣದಿಂದಲೇ ಜಾರಿಗೆ ಬರುವಂತೆ ಈ ಕೆಳಕಂಡ ಕ್ರಮಗಳನ್ನು ಸೂಚಿಸಿದೆ:

1. ಉಪ ಲೆಕ್ಕ ನಿಯಂತ್ರಣಾಧಿಕಾರಿ(ತರಬೇತಿ ಮತ್ತು ಕ್ರೀಡೆ), ಕವಿಪ್ರನಿನಿ ಮಾನವ ಸಂಪನ್ಮೂಲ ಅಭಿವೃದ್ಧಿ ಕೇಂದ್ರ, ಹೂಡಿ, ಬೆಂಗಳೂರು ರವರ ಕಾರ್ಯಸ್ಥಾನವನ್ನು ಕವಿಪ್ರನಿನಿ ಮಾನವ ಸಂಪನ್ಮೂಲ ಅಭಿವೃದ್ಧಿ ಕೇಂದ್ರದಿಂದ ನಿಗಮ ಕಾರ್ಯಾಲಯ, ಕವಿಪ್ರನಿನಿ, ಕಾವೇರಿ ಭವನ, ಬೆಂಗಳೂರು ಇಲ್ಲಿಗೆ ಸ್ಥಳಾಂತರಿಸಿದೆ.

2. ಉಪ ಲೆಕ್ಕ ನಿಯಂತ್ರಣಾಧಿಕಾರಿ(ತರಬೇತಿ ಮತ್ತು ಕ್ರೀಡೆ) ರವರು ಹಾಲಿ ನಿರ್ವಹಿಸುತ್ತಿರುವ ತಮ್ಮ ಹುದ್ದೆಯ ಕೆಲಸಗಳ ಜೊತೆಗೆ, ಅಧಿಕವಾಗಿ ಕವಿಪ್ರನಿನಿಯ ನಿಗಮ ಕಾರ್ಯಾಲಯದಲ್ಲಿ ಕನ್ನಡ ಘಟಕಕ್ಕೆ ಸಂಬಂಧಿಸಿದ ಈ ಕೆಳಕಂಡ ಕಾರ್ಯಗಳನ್ನೂ ಸಹ ನಿರ್ವಹಿಸಲು ಸೂಚಿಸಿದೆ:

   (ಅ) ಆಡಳಿತದಲ್ಲಿ ಕನ್ನಡ ಭಾಷೆಯನ್ನು ಅನುಷ್ಠಾನಗೊಳಿಸುವ ವಿಷಯದಲ್ಲಿ ಕನ್ನಡ ಅಭಿವೃದ್ಧಿ ಪ್ರಾಧಿಕಾರವು ಕಾಲಕಾಲಕ್ಕೆ ನೀಡುವ ನಿರ್ದೇಶನಗಳನ್ನು ನಿಗಮದಲ್ಲಿ ಪರಿಣಾಮಕಾರಿಯಾಗಿ ಪಾಲಿಸಲು ಅವಶ್ಯವಿರುವ ಎಲ್ಲಾ ಕ್ರಮಗಳನ್ನು ತೆಗೆದುಕೊಳ್ಳತಕ್ಕದ್ದು ಮತ್ತು ಕನ್ನಡ ಅಭಿವೃದ್ಧಿ ಪ್ರಾಧಿಕಾರಕ್ಕೆ ಸಲ್ಲಿಸಬೇಕಾದ ಅನುಸರಣಾ ವರದಿಗಳನ್ನು ಸಲ್ಲಿಸತಕ್ಕದ್ದು.

   (ಆ) ಕವಿಪ್ರನಿನಿಯು ದಿನಪತ್ರಿಕೆಗಳಲ್ಲಿ ಹಾಗೂ ವೆಬ್‌ಸೈಟಿನಲ್ಲಿ ಪ್ರಕಟಿಸಬೇಕಿರುವ ಟೆಂಡರ್ ಅಧಿಸೂಚನೆಗಳು, ಜಾಹೀರಾತುಗಳು, ಪ್ರಕಟಣೆಗಳು ಇತ್ಯಾದಿಗಳನ್ನು ಕನ್ನಡ ಭಾಷೆಗೆ ತರ್ಜುಮೆಗೊಳಿಸುವ ಮತ್ತು ನಿಗಮ ಕಾರ್ಯಾಲಯದ ವಿವಿಧ ಶಾಖೆಗಳ ದಿನನಿತ್ಯದ ಕೆಲಸಗಳಲ್ಲಿ ಅಗತ್ಯವಿರುವ ವಿಷಯಗಳನ್ನು ಕನ್ನಡ ಭಾಷೆಗೆ ತರ್ಜುಮೆಗೊಳಿಸುವ ಕಾರ್ಯಗಳನ್ನು ನಿರ್ವಹಿಸತಕ್ಕದ್ದು.

(ಇ) ಕನ್ನಡ ಘಟಕಕ್ಕೆ ಸಂಬಂಧಿಸಿದಂತೆ ಮೇಲಾಧಿಕಾರಿಗಳು ವಹಿಸುವಂತಹ ಇತರೆ ಎಲ್ಲಾ ಕೆಲಸಗಳನ್ನು ನಿರ್ವಹಿಸತಕ್ಕದ್ದು.

೩. ಕನ್ನಡ ಘಟಕದ ಸಮನ್ವಯಕರಾಗಿ ಕಾರ್ಯನಿರ್ವಹಿಸುತ್ತಿರುವ ಶ್ರೀ.ಎ.ಆರ್.ಗೋವಿಂದ ಸ್ವಾಮಿ, ಸಹಾಯಕ, ಸಾರ್ವಜನಿಕ ಸಂಪರ್ಕಾಧಿಕಾರಿ, ಕವಿಪ್ರನಿನಿ ರವರ ಶಾಖೆ ರವರು ಕನ್ನಡ ಘಟಕದ ವಿಷಯಗಳಲ್ಲಿ ಉಪ ಲೆಕ್ಕ ನಿಯಂತ್ರಣಾಧಿಕಾರಿ(ತರಬೇತಿ ಮತ್ತು ಕ್ರೀಡೆ), ಕವಿಪ್ರನಿನಿ ರವರ ನಿಯಂತ್ರಣದಲ್ಲಿ ಕಾರ್ಯನಿರ್ವಹಿಸತಕ್ಕದ್ದು ಮತ್ತು ಕನ್ನಡ ಘಟಕದ ವಿಷಯಗಳಿಗೆ ಸಂಬಂಧಿಸಿದ ಕಡತಗಳನ್ನು ಉಪ ಲೆಕ್ಕ ನಿಯಂತ್ರಣಾಧಿಕಾರಿ(ತರಬೇತಿ ಮತ್ತು ಕ್ರೀಡೆ) ರವರ ಮೂಲಕ ಪ್ರಧಾನ ವ್ಯವಸ್ಥಾಪಕರು(ಸಿಬ್ಬಂದಿ), ಕವಿಪ್ರನಿನಿ, ರವರಿಗೆ ಸಲ್ಲಿಸತಕ್ಕದ್ದು.

ನಿರ್ದೇಶಕರು(ಆಡಳಿತ ಮತ್ತು ಮಾ.ಸಂ),
ಕ.ವಿ.ಪ್ರ.ನಿ.ನಿ.

<u>ಪ್ರತಿಗಳು ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ:</u>

1) ಎಲ್ಲಾ ಮುಖ್ಯ ಇಂಜಿನಿಯರ್(ವಿ)ಗಳು, ಕವಿಪ್ರನಿನಿ.
2) ಎಲ್ಲಾ ಆರ್ಥಿಕ ಸಲಹೆಗಾರರು, ಕವಿಪ್ರನಿನಿ, ಕಾವೇರಿ ಭವನ, ಬೆಂಗಳೂರು.
3) ಆಡಳಿತಾಧಿಕಾರಿ, ಕವಿಪ್ರನಿನಿ ಮಾನವ ಸಂಪನ್ಮೂಲ ಅಭಿವೃದ್ಧಿ ಕೇಂದ್ರ, ಕವಿಪ್ರನಿನಿ, ಹೂಡಿ.
4) ಉಪ-ಲೆಕ್ಕ ನಿಯಂತ್ರಣಾಧಿಕಾರಿ(ತರಬೇತಿ ಮತ್ತು ಕ್ರೀಡೆ), ಕವಿಪ್ರನಿನಿ ಮಾನವ ಸಂಪನ್ಮೂಲ ಅಭಿವೃದ್ಧಿ ಕೇಂದ್ರ, ಕವಿಪ್ರನಿನಿ, ಹೂಡಿ.
5) ವ್ಯವಸ್ಥಾಪಕ ನಿರ್ದೇಶಕರು/ನಿರ್ದೇಶಕರು(ಪ್ರಸರಣ)/(ಹಣಕಾಸು)/(ಆ. ಮತ್ತು ಮಾ.ಸಂ.), ಕವಿಪ್ರನಿನಿ, ಇವರುಗಳ ಹಿರಿಯ ಆಪ್ತ ಕಾರ್ಯದರ್ಶಿಗಳು, ಬೆಂಗಳೂರು.
6) ನಿಗಮ ಕಾರ್ಯಾಲಯದ ಎಲ್ಲಾ ಅಧಿಕಾರಿಗಳು, ಕವಿಪ್ರನಿನಿ, ಕಾವೇರಿ ಭವನ, ಬೆಂಗಳೂರು.

<u>ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ www.kptcl.com-->eprasarana ವೆಬ್ ಸೈಟ್‌ನಲ್ಲಿ ಪ್ರಕಟಿಸಲಾಗಿದೆ.</u>

1. ಎಲ್ಲಾ ಅಧೀಕ್ಷಕ ಇಂಜಿನಿಯರ್ / ನಿಯಂತ್ರಣಾಧಿಕಾರಿ, ಕವಿಪ್ರನಿನಿ.
2. ಎಲ್ಲಾ ಕಾರ್ಯನಿರ್ವಾಹಕ ಇಂಜಿನಿಯರ್ / ಉಪ ಲೆಕ್ಕನಿಯಂತ್ರಣಾಧಿಕಾರಿ, ಕವಿಪ್ರನಿನಿ.